# ಚಾಯ್ ಪೆ ಚರ್ಚಾ ಮೂಲಕ ಮತಯಾಚನೆ ಮಾಡಿದ ಜಗದೀಶ್ ಶೆಟ್ಟರ್



ಬೆಳಗಾವಿ: ಲೋಕಸಭಾ ಚುನಾವಣೆಯ ಅಂಗವಾಗಿ ಬಿಜೆಪಿ ಅಭ್ಯರ್ಥಿ ಜಗದೀಶ್ ಶೆಟ್ಟರ್ ಅವರು ಶುಕ್ರವಾರ ಬೆಳಗ್ಗೆ ಇಲ್ಲಿನ ಬಸವ ಕಾಲೋನಿಯಲ್ಲಿ ಚಾಯ್ ಪೇ ಚರ್ಚಾ ಕಾರ್ಯಕ್ರಮದ ಮೂಲಕ ಸಾರ್ವಜನಿಕರನ್ನು ಭೇಟಿ ಮಾಡಿ, ಮತಯಾಚನೆ ನಡೆಸಿದರು.ಪ್ರಚಾರದ ವೇಳೆ ಪ್ರಧಾನ ನರೇಂದ್ರ ಮೋದಿ ಅವರ ನೇತೃತ್ವದಲ್ಲಿ ಭಾರತ ವಿಕಸಿತ ಭಾರತದತ್ತ ದೇಶ ದಾಪುಗಾಲು ಹಾಕುತ್ತಿದೆ. ಮೋದಿಯವರು ಪ್ರಧಾನಿಯಾದ ಮೇಲೆ ಎಲ್ಲಾ ಕ್ಷೇತ್ರದಲ್ಲಿ ಅಭಿವೃದ್ಧಿ ಹೊಂದಿದೆ. ದೇಶವನ್ನು ಇನ್ನು ಹೆಚ್ಚು ಅಭಿವೃದ್ಧಿ ಮಾಡಲು ಮೂರನೇ ಸಲ ಮೋದಿಯವರು ಪ್ರಧಾನ ಮಾಡಬೇಕು. ಆ ನಿಟ್ಟಿನಲ್ಲಿ ಬಿಜೆಪಿಗೆ ಮತ ನೀಡಿ ಗೆಲ್ಲಿಸಬೇಕು ಎಂದು ಮನವಿ ಮಾಡಿದರು.

ಈ ಸಂದರ್ಭದಲ್ಲಿ ಬಸವ ಕಾಲೋನಿಯ ಡಾ. ರವಿ ಪಾಟೀಲ್, ಕೆ.ಐ. ಗಾಣಗೇರ, ಎಸ್.ಆರ್. ಪಾಟೀಲ, ಮೋಹನ ಹೂಗಾರ,
ಬಸಪ್ಪ ಚಿಕಲದಿನ್ನಿ, ಪ್ರಕಾಶ ಕೋತ, ಪ್ರಮೋದ ಕೋತ, ಬಿ.ಎಂ. ಮುಗದುಮ್, ಚೇತನ ಬಡಿಗೇರ, ಆದರ್ಶ ಪೈಲ್ವಾನ್, ಸುರೇಶ ಬಂಡೆಪ್ಪನವರ, ರಮೇಶ ಪಾಟೀಲ್ ಹಾಗೂ ಇತರರು ಉಪಸ್ಥಿತರಿದ್ದರು.

# ಕಾಂಗ್ರೆಸ್‌ಗೆ ಸವಾಲ್ ಹಾಕಿದ ಮಾಜಿ ಸಿಎಂ ಶೆಟ್ಟರ್



ಬೆಳಗಾವಿ: ಕಾಂಗ್ರೆಸ್ ನವರು ನಾನು ಬೆಳಗಾವಿ ಅಭಿವೃದ್ಧಿಗೆ ವಿರೋಧ ಮಾಡಿದ್ದೇನೆ ಎನ್ನುತ್ತಿದ್ದಾರೆ. ಅವರು ದಾಖಲೆ ತೆಗೆದು ನೋಡಲಿ.ಬೇಕಾ ಬಿಟ್ಟಿಯಾಗಿ ಆಪಾದನೆ ಮಾಡುವದು ಸರಿಯಲ್ಲ ಎಂದು ಬೆಳಗಾವಿ ಲೋಕಸಭಾ ಮತಕ್ಷೇತ್ರದ ಬಿಜೆಪಿ ಅಭ್ಯರ್ಥಿ ಜಗದೀಶ್ ಶೆಟ್ಟರ್ ಹೇಳಿದರು.

ಶುಕ್ರವಾರ ಸುದ್ದಿಗಾರರೊಂದಿಗೆ ಮಾತನಾಡಿದರು. ಶೆಟ್ಟರ್ ಬಗ್ಗೆ ಬೈಬೇಕು ಎಂದು ಕಾಂಗ್ರೆಸ್ ಏನಾದರೂ ಬೈದು ಬಿಡುತ್ತಾರೆ. ಉಡಾನ ಯೋಜನೆ ಹುಬ್ಬಳ್ಳಿ ಎರಡನೇ ಪಟ್ಟಿಯಲ್ಲಿ ಬಂತು ಬೆಳಗಾವಿಗೂ ಕೂಡ ಎರಡನೇ ಪಟ್ಟಿಯಲ್ಲಿ ಬಂತು. ದಾಖಲೆ ತೆಗೆದು ನೋಡಲಿ, ನಾನೇಕೆ ತೆಗೆದುಕೊಂಡು ಹೋಗಲಿ, ಹುಬ್ಬಳ್ಳಿ ಗೂ ಬೇರೆ ಬಂದಿದೆ. ಬೆಳಗಾವಿಗೂ ಬೇರೆ ಬಂದಿದೆ ಎಂದ ಅವರು ಇಷ್ಟು ಮಾತನಾಡುವ ಕಾಂಗ್ರೆಸ್ ನವರು ಬೆಳಗಾವಿಗೆ ಉಡಾನ್ ಯೋಜನೆ ತರಬೇಕಿತ್ತು. ಕಾಂಗ್ರೆಸ್ ಸಿಎಂ, ಡಿಸಿಎಂ ಹೇಳಿ ಬೆಳಗಾವಿಗೆ ಏನು ವಿಶೇಷ ಕೊಡುಗೆ ತೆಗೆದುಕೊಂಡು ಬಂದಿದ್ದಾರೆ ಎಂದು ಪ್ರಶ್ನಿಸಿದರು.

ನಮ್ಮ ಬಗ್ಗೆ ಮಾತಾಡಲು ಏನದೆ ಹಕ್ಕಿದೆ. ಈಗ ಕಾಂಗ್ರೆಸ್ ಸರಕಾರ ಇದೆ. ಬೆಳಗಾವಿ ಜಿಲ್ಲೆಗೆ ಏನು ಕೊಡುಗೆ ತೆಗೆದುಕೊಂಡು ಬಂದಿದ್ದೀರಾ ಹೇಳಿ. ಯುಪಿಎ ಸರಕಾರ ಇದ್ದಾಗ ಏನು ತಂದಿದ್ದೀರಿ ? ಬೆಳಗಾವಿ ವಿಮಾನ ನಿಲ್ದಾಣ ಎಗ್ಜಿಬಿಷನ್ ಇದ್ದಂತೆ ಇತ್ತು. ವಿಮಾನ ಬರುತ್ತಿರಲಿಲ್ಲ. ಅವಾಗ ಉಡಾನ್ ಏಕೆ ಮಾಡಲಿಲ್ಲ. ಹೈ ಕೊರ್ಟ್ ಧಾರವಾಡ ಗೆ ಶಿಫ್ಟ್ ಆಗಿದ್ದ ಕೂಡ ದಾಖಲೆ ತೆಗೆದು ನೋಡಲಿ ಎಂದು ಸವಾಲ್ ಹಾಕಿದರು.ಹೈಕೋರ್ಟ್ ಬೆಂಚ್ ಧರ್ಮಸಿಂಗ್ ಸಿಎಂ ಆಗಿದ್ದಾಗ ಆಗಿತ್ತು. ಕಾಂಗ್ರೆಸ್ ಈಗಾಲೇ ಸೋತು ಬಿಟ್ಟಿದ್ದಾರೆ, ಇಡೀ ರಾಷ್ಟ್ರದಲ್ಲಿ ಕಾಂಗ್ರೆಸ್ ಸೋತಿದೆ. ಕಾಂಗ್ರೆಸ್ ಚುನಾವಣೆಗೆ ನಿಂತಿದ್ದೆ 230 ಸೀಟು ಎಂದಾದರೂ ಅಧಿಕಾರಕ್ಕೆ ಬರಲು ಸಾಧ್ಯವೆ ಎಂದ ಅವರು ಕಾಂಗ್ರೆಸ್ ನವರು ಪ್ರಧಾನ ಅಭ್ಯರ್ಥಿ ಯಾರು ಎಂದು ಹೇಳಿ ಎಂದರು.

ಹುಬ್ಬಳ್ಳಿಯಲ್ಲಿ ವಿದ್ಯಾರ್ಥಿನಿ ನೇಹಾ ಕೊಲೆ ವಿಚಾರಕ್ಕೆ ಉತ್ತರಿಸಿದ ಅವರು, ಹುಬ್ಬಳ್ಳಿಯಲ್ಲಿ ನೇಹಾ ಕೊಲೆಯಾಗಿದ್ದು ಅತ್ಯಂತ ಖಂಡನೀಯ ಇದನ್ನು ನಾನು ಖಂಡಿಸುತ್ತೇನೆ. ಲವ್ ಜಿಹಾದ್ ನಲ್ಲಿ ಇದು ನಡೆಯುತ್ತಿದೆ, ಸೇಡಿನಿಂದ ಹುಡುಗಿ ಕೊಲೆ ಮಾಡಿದ್ದಾರೆ. ಮನಸ್ಥಿತಿ ಹೇಗಿದೆ ನೋಡಿ. ಕೊಲೆ ಮಾಡಲು ಕಾರಣ ರಾಜ್ಯದಲ್ಲಿ ಕಾನೂನು ಸುವ್ಯವಸ್ಥೆ ಹದಗೆಟ್ಟು ಹೋಗಿದೆ ಎಂದರು.ಕಾಂಗ್ರೆಸ್ ಸರಕಾರ ಬಂದ ಮೇಲೆ ಬಾಂಬ್ ಬ್ಲಾಸ್ಟ್, ಕೊಲೆ ನೋಡಿದರೆ ತುಷ್ಟೀಕರಣ ನೀತಿ ಇದೆ. ಇದರಿಂದ ಎಲ್ಲ ಘಟನೆಗಳು ಆಗಿತ್ತಿದೆ. ಪಾಕಿಸ್ತಾನ ಜಿಂದಾಬಾದ್ ಎಂದು ಘೋಷಣೆ ಕೂಗುತ್ತೀರಿ ಆ ಧೈರ್ಯ ಹೇಗೆ ಬಂತು. ಕಾಂಗ್ರೆಸ್ ಕಾರ್ಯಕರ್ತರು ಪಾಕಿಸ್ತಾನ ಜಿಂದಾಬಾದ್ ಎನ್ನುವ ಮನಸ್ಥಿತಿ ಇದೆ ಎಂದರೇ ಇದು ತುಷ್ಟೀಕರಣ ನೀತಿ ಓಟು ಬ್ಯಾಂಕ್ ಗಾಗಿ ಹೀಗೆ ಮಾಡುತ್ತಿದ್ದಾರೆ ಎಂದರು.

ಕಾಲೇಜು ಕ್ಯಾಂಪಸ್ ಗೆ ಹೋಗಿ ಹುಡುಗಿ ಕೊಲೆ ಮಾಡುವ ಧೈರ್ಯ ಬರುತ್ತದೆ ಎಂದರೇ ಕಾನೂನು ಸುವ್ಯವಸ್ಥೆ ಹದಗೆಟ್ಟಿದೆ. ಕಾಂಗ್ರೆಸ್ ಸರಕಾರದಿಂದ ಭಯದ ವಾತಾವರಣ ನಿರ್ಮಾಣವಾಗಿದೆ. ಇಂತಹ ಘಟನೆ ಮರುಕಳಿಸಬಾರದು. ತುಪ್ಪ ಮಾಡಿದವರಿಗೆ ಶಿಕ್ಷೆ ಆಗಬೇಕು ಎಂದರು.ಕಾಂಗ್ರೆಸ್ ಕಾರ್ಪೋರೇಟ್ ರ ಮಗಳ ಅವಳು. ಅವನ ನನಗೆ ಪರಿಚಯ ಇದ್ದಾರೆ. ಅವರ ತಂದೇ ಹೇಳಿದ್ದಾರೆ ಲವ್ ಜಿಹಾದ್ ಎಂದು ಲವ್ ಜಿಹಾದ್ ಹಿನ್ನೆಲೆ ಕೊಲೆಯಾಗಿದೆ ಇದರ ಸಂಪೂರ್ಣ ತನಿಖೆ ಆಗಬೇಕು. ಇಂತಹ ವ್ಯಕ್ತಿ ಗೆ ಶಿಕ್ಷೆ ಆಗಬೇಕು. ಬಿಜೆಪಿ ಇದನ್ನು ಖಂಡಿಸುತ್ತದೆ ಎಂದರು.

# ಎಂಇಎಸ್‌ನ ಲೋಕಸಭಾ ಅಭ್ಯರ್ಥಿಯ ಮಹದೇವ್ ಪಾಟೀಲ್ ನಾಮಪತ್ರ ಸಲ್ಲಿಸಿಕೆ



ಬೆಳಗಾವಿ: ಲೋಕಸಭಾ ಕ್ಷೇತ್ರದಿಂದ ಮಹಾರಾಷ್ಟ್ರ ಏಕೀಕರಣ ಸಮಿತಿಯ ಅಭ್ಯರ್ಥಿಯಾಗಿ ಮಹಾದೇವ ಪಾಟೀಲ್ ನಾಮಪತ್ರ ಸಲ್ಲಿಕೆ ಮಾಡಿದ್ದರು

ಬೆಳಗಾವಿ ಏಕೀಕರಣ ಸಮಿತಿ ಅಭ್ಯರ್ಥಿ ಮಹಾದೇವ ಪಾಟೀಲ್ ಧರ್ಮವೀರ ಸಂಭಾಜೀ ವೃತ್ತದಲ್ಲಿ ಸಂಭಾಜೀ ಮಹಾರಾಜರ ಪ್ರತಿಮೆಗೆ ಮಾಲಾರ್ಪಣೆ ಮಾಡಿ ಅಸಂಖ್ಯ ಎಂಇಎಸ್ ಕಾರ್ಯಕರ್ತರನೊಂದಿಗೆ ಚಕ್ಕಡಿ ಏರಿ ಮೆರವಣಿಗೆ ಆರಂಭಿಸಿದ್ದರು.

ಮೆರವಣಿಗೂ ಧರ್ಮವೀರ ಸಂಭಾಜೀ ವೃತ್ತ,ಕಾಲೇಜು ರಸ್ತೆ ತಲುಪಿತ್ತು ರಸ್ತೆಯುದ್ದಕ್ಕೂ ಭಗವಾಧ್ವಜ ಆಕರ್ಷಣೆ ವಾಗಿದ್ದವು ಎಂಇಎಸ್ ಅಭ್ಯರ್ಥಿ ಮಹಾದೇವ ಪಾಟೀಲ್ ಚೆನ್ನಮ್ಮ ವೃತ್ತದಲ್ಲಿ ಚೆನ್ನಮ್ಮ ಪ್ರತಿಮೆಗೆ ಮಾಲಾರ್ಪಣೆ ಮಾಡಿ ಜಿಲ್ಲಾಧಿಕಾರಿ ಕಚೇರಿಗೆ ನಾಮಪತ್ರ ಸಲ್ಲಿಕೆ ಮಾಡಿದ್ದರು. ರಮಾಕಾಂತ ಕೊಂಡೊಸ್ಕರ್, ಚವ್ಹಾಣ ಪಾಟೀಲ್ ,ಶಿವಾಜಿ ಸುಂಠಕರ, ಮನೋಹರ್ ಕಿರಣಗಿ , ಪ್ರಕಾಶ್ ಮರ್ಗಾಂವ್ .ಸಾಗರ ಪಾಟೀಲ್, ಸೇರಿ ಮಾಜಿ ಪಾಲಿಕೆ ಸದಸ್ಯರು, ತಾಲೂಕ ಪಂಚಾಯಿತಿ ಮಾಜಿ ಸದಸ್ಯರು ನಾಮಪತ್ರ ಸಲ್ಲಿಕೆ ವೇಳೆ ಇದ್ದರು

## ಬಾರ್ ಅಸೋಸಿಯೇಷನ್ ಶೆಟ್ಟರ ಪರ ಪ್ರಚಾರ

ಬೆಳಗಾವಿ : ಬಾರ್ ಅಸೋಸಿಯೇಷನ್ ವತಿಯಿಂದ ಲೋಕಸಭಾ ಅಭ್ಯರ್ಥಿ ಆದಂತ ಜಗದೀಶ್ ಶೆಟ್ಟರ್ ಇವರಿಗೆ ಬಾರ್ ಅಸೋಸಿಯೇಷನ್ ಹಾಗೂ ಇಲ್ಲೇ ವಕೀಲರಿಂದ ಚುನಾವಣೆ ಪ್ರಚಾರವನ್ನು ಜಗದೀಶ್ ಶೆಟ್ಟರಗೆ ಮತ ನೀಡುವ ಮುಖಾಂತರ ಎಲ್ಲ ವಕೀಲ ಸಂಘಟನೆ ಹಾಗೂ ವಕೀಲರಲ್ಲಿ ಬಿಜೆಪಿಗೆ ಮತ ನೀಡುವ ಮೂಲಕ ಮಾನ್ಯ ಲೋಕಸಭಾ ಅಭ್ಯರ್ಥಿ ಮನವಿ ಮಾಡಿಕೊಂಡರು ಇಂದು ಬೆಳಗಾವಿ ವಕೀಲರ ಸಂಘದಲ್ಲಿ ಭಾರತೀಯ ಜನತಾ ಪಕ್ಷದ ಅಧಿಕೃತ ಅಭ್ಯರ್ಥಿ ಜಗದೀಶ್ ಶೆಟ್ಟರ್ ಅವರ ಸಭೆ ನಡೆಯಿತು.

ಬಿಜೆಪಿ ರಾಜ್ಯ ಉಪಾಧ್ಯಕ್ಷರಾದ ಶ್ರೀ ಅನಿಲ್ ಬೆನಕೆ ಎಂ.ಬಿ ಜೀರ್ಲಿ ವಕೀಲ ಆರ್ ಎಸ್ ಮುತಾಲಿಕ್ ಮುರಗೇಂದ್ರ ಗೌಡ ಪಾಟೀಲ್ ಮತ್ತು ಇತರ ಗಣ್ಯರು ಮತ್ತು ಪದಾಧಿಕಾರಿಗಳು ಉಪಸ್ಥಿತರಿದ್ದರು.

## ಫಯಾಜ್‌ಗೆ ಗಲ್ಲು ಶಿಕ್ಷೆಯಾಗಲಿ– ಕ್ಯಾವಟರ್

ಕೊಪ್ಪಳ: ಹುಬ್ಬಳ್ಳಿಯಲ್ಲಿ ಹಿಂದೂ ಯುವತಿ ನೇಹಾ ಹಿರೇಮಠ ಅವರ ಹತ್ಯೆ ಅತ್ಯಂತ ದುರಾದೃಷ್ಟಕರ ಸಂಗತಿ. ಈ ಘಟನೆ ಖಂಡನಾರ್ಹ. ರಾಜ್ಯ ಸರ್ಕಾರ ಆರೋಪಿಯನ್ನು ಧರ್ಮದ ಆಧಾರದ ಮೇಲೆ ನೋಡದೆ ಆತ ಮಾಡಿರುವ ತಪ್ಪಿಗೆ ಸೂಕ್ತ ಶಿಕ್ಷೆ ನೀಡಬೇಕು ಎಂದು ಕೊಪ್ಪಳ ಲೋಕಸಭಾ ಕ್ಷೇತ್ರದ ಬಿಜೆಪಿ ಅಭ್ಯರ್ಥಿ ಡಾ.ಬಸವರಾಜ ಕ್ಯಾವಟರ್ ಒತ್ತಾಯಿಸಿದ್ದಾರೆ. ಸಹೋದರಿ ನೇಹಾ ಹಿರೇಮಠ ಅವಳ ಆತ್ಮಕ್ಕೆ ಶಾಂತಿ ದೊರೆಯಲಿ. ಆರೋಪಿ ಫಯಾಜಗೆ ಗಲ್ಲುಶಿಕ್ಷೆಯಾಗಬೇಕು ಇಂತಹ ಘಟನೆಗಳು ಮರುಕಳಿಸದಂತೆ ರಾಜ್ಯ ಸರ್ಕಾರ ಎಚ್ಚರಿಕೆ ವಹಿಸಬೇಕು ಎಂದು ಪ್ರಕಟಣೆ ಮೂಲಕ ಆಗ್ರಹಿಸಿದ್ದಾರೆ.

ಸಹೋದರಿ ನೇಹಾ ಹಿರೇಮಠ ಅವರ ಹತ್ಯೆ ಖಂಡಿಸಿ ಎಬಿವಿಪಿ ಹುಬ್ಬಳ್ಳಿ ಬಂದ್ ಘೋಷಿಸಿದ್ದು, ಇದಕ್ಕೆ ನನ್ನ ಬೆಂಬಲವೂ ಇದೆ. ಇಂತಹ ಘಟನೆಯಿಂದ ಸಮಾಜದಲ್ಲಿ ಶಾಂತಿ, ಭಾತೃತ್ವ ಭಾವನೆ ಕದಡುವ ಕೆಲಸವಾಗುತ್ತಿದೆ. ಇದಕ್ಕೆ ಬಿಜೆಪಿ ಅವಧಿಯಲ್ಲಿ ತಂದ ಕಠಿಣ ಕ್ರಮ ಕೈಗೊಳ್ಳಬೇಕು. ಹತ್ಯೆಯಲ್ಲಿ ಯಾರೂ ರಾಜಕೀಯ ಮಾಡದೇ ಸಹೋದರಿ ಹತ್ಯೆಗೆ ನ್ಯಾಯ ದೊರಕಿಸಿಕೊಡಬೇಕು ಎಂದಿದ್ದಾರೆ.

# ನಿರಾಶ್ರಿತ ವ್ಯಕ್ತಿಯನ್ನು ಬೆಳಗಾವಿಯ ಬಿಮ್ಸ್ ಆಸ್ಪತ್ರೆಗೆ ದಾಖಲಿಸುವಲ್ಲಿ ಯಶಸ್ವಿ



ಬೆಳಗಾವಿ: ಅಸಹಜ ನಿರಾಶ್ರಿತ ವ್ಯಕ್ತಿಗೆ ಸಮಾಜ ಸೇವಕರಿಂದ ಸಹಾಯ ಸಿಗುತ್ತದೆ ಸೇವಾ ಫೌಂಡೇಶನ್ ಶಿಬಿರ ಬೆಳಗಾವಿ ಮತ್ತು ಫೇಸ್‌ಬುಕ್ ಫ್ರೆಂಡ್ಸ್ ಸರ್ಕಲ್ ತಂಡವು ಅಸಹಜ ನಿರಾಶ್ರಿತ ವ್ಯಕ್ತಿಯನ್ನು ಬೆಳಗಾವಿಯ ಬಿಮ್ಸ್ ಆಸ್ಪತ್ರೆಗೆ ದಾಖಲಿಸುವಲ್ಲಿ ಯಶಸ್ವಿಯಾಗಿದೆ. ರೋಗಿಯನ್ನು 108 ಆಂಬ್ಯುಲೆನ್ಸ್‌ನಲ್ಲಿ ಆಸ್ಪತ್ರೆಗೆ ರವಾನಿಸಲಾಗಿದೆ. ರೋಗಿಯು ಮನೋವೈದ್ಯಕೀಯ ವಾರ್ಡ್‌ನಲ್ಲಿ ಹೆಚ್ಚಿನ ಚಿಕಿತ್ಸೆಗೆ ಒಳಗಾಗುತ್ತಾನೆ. ರೋಗಿಯನ್ನು ದಾಖಲಿಸಲು ನಮಗೆ ಸಹಾಯ ಮಾಡಿದ ಬಿಮ್ಸ್ ತುರ್ತು ಚಿಕಿತ್ಸಾ ವಿಭಾಗದ ಡಾ ವಿಜಯಕುಮಾರ್ ಪಾಟೀಲ್ ಅವರಿಗೆ ನಾವು ಕೃತಜ್ಞತೆ ಸಲ್ಲಿಸುತ್ತೇವೆ. ಕ್ಯಾಂಪ್ ದರ್ಗಾದ ಹಿಂದೆ ಹರಿದ ಬಟ್ಟೆಗಳೊಂದಿಗೆ ವ್ಯಕ್ತಿ ರಸ್ತೆಯಲ್ಲಿ ನಡೆದುಕೊಂಡು ಹೋಗುತ್ತಿರುವುದು ಕಂಡುಬಂದಿದೆ. ಫೋಟೋ ಮತ್ತು ವೀಡಿಯೋದಲ್ಲಿ ತೋರಿಸಿರುವಂತೆ ನಾವು ತಂಡವು ಅವನಿಗೆ ಸ್ನಾನ ಮಾಡಿ ಹೊಸ ಬಟ್ಟೆಗಳನ್ನು ಹಾಕಿದ್ದೇವೆ. ಸೇವಾ ಫೌಂಡೇಶನ್‌ನಿಂದ ಅಕಿಬ್ ಬೇಪಾರಿ ಮತ್ತು ಸ್ನೇಹಿತರನ್ನು ತಂಡ ಪ್ರಸ್ತುತಪಡಿಸುತ್ತದೆ. ಫೇಸ್‌ಬುಕ್ ಫ್ರೆಂಡ್ಸ್ ಸರ್ಕಲ್ ತಂಡ ಸಂತೋಷ್ ದಾರೆಕರ್, ಅವಧೂತ್ ತುಡಾವೇಕರ್ ಮತ್ತು ದಿನೇಶ್ ಕೊಲ್ಹಾಪುರೆ ಉಪಸ್ಥಿತರಿದ್ದರು. ಅಂತಹ ನಿರಾಶ್ರಿತರು ನಮಗೆ ಕಂಡುಬಂದಲ್ಲಿ ನಮ್ಮನ್ನು ಸಂಪರ್ಕಿಸಲು ಎಲ್ಲಾ ಬೆಳಗಾವಿಯವರಿಗೆ ವಿನಂತಿಸಿ. ಅದು ಕಾಣೆಯಾದ ವ್ಯಕ್ತಿಯೂ ಆಗಿರಬಹುದು..



ಯರಗಟ್ಟಿ : ಸಮೀಪದ ಸತ್ತಿಗೇರಿ ಗ್ರಾಮದ ಗ್ರಾಮದೇವಿ ಜಾತ್ರಾ ಮಹೋತ್ಸವ ಅಂಗವಾಗಿ ಸಾಮಾಜಿಕ ನಾಟಕ ಉದ್ಘಾಟಿಸಿ ಶಾಸಕ ವಿಶ್ವಾಸ ವೈದ್ಯ ಮಾತನಾಡಿದ ಅವರು ದಶಕಗಳ ಹಿಂದೆ ಗ್ರಾಮಾಂತರ ಪ್ರದೇಶದಲ್ಲಿ ನಾಟಕ ಪ್ರದರ್ಶನಗಳು ನಡೆಯುತ್ತಿದ್ದವು. ಪ್ರದರ್ಶನಗಳ ಹಿಂದೆ ಸಮಾಜದ ಅಂಕುಡೊಂಕು ತಿದ್ದುವ ಉದ್ದೇಶ ಇರುತ್ತಿತ್ತು. ಬದಲಾದ ಕಾಲಘಟ್ಟದಲ್ಲಿ ಆ ಕೆಲಸವನ್ನು ಸಾಮಾಜಿಕ ಕಥಾಹಂದರ ಒಳಗೊಂಡ ನಾಟಕಗಳು ನಿಭಾಯಿಸಿದವು. ಆದರೆ ಇತ್ತೀಚಿನ ದಿನಗಳಲ್ಲಿ ನಿರ್ದಿಷ್ಟ ಜಾತಿ ಸೂಚಕ ಶೀರ್ಷಿಕೆಯನ್ನು ಒಳಗೊಂಡ ನಾಟಕಗಳು ಬರುತ್ತಿವೆ. ನಾಟಕಗಳು ಒಂದು ಜಾತಿಗೆ ಸೀಮಿತಗೊಂಡರೆ ಸಮಾಜಕ್ಕೆ ಒಳ್ಳೆಯ ಸಂದೇಶ ತಲುಪಿಸಲು ಸಾಧ್ಯವಾಗುವುದಿಲ್ಲ ಎಂಬುದನ್ನು ಪ್ರತಿಯೊಬ್ಬರೂ ಅರಿಯಬೇಕು ಎಂದರು ಈ ಸಂಧರ್ಭದಲ್ಲಿ ಮಾಜಿ ಗ್ರಾ. ಪಂ. ಅಧ್ಯಕ್ಷ ಬಂಗಾರಪ್ಪ ಹರಳಿ, ಜಾಫರ್ ಲಿಂಬುವಾಲೆ, ಚನ್ನಪ್ಪ ಶೆಟ್ಟರ, ರಾಜು ಸೋಮಣ್ಣವರ, ರಾಮಣ್ಣ ಮಿಕಲಿ, ಪುಟ್ಟಪ್ಪ ಯಾಕಣ್ಣವರ, ನಿಂಗಪ್ಪ ಹೊನುಕುಪ್ಪಿ, ನಿಂಗಪ್ಪ ಹೊಸಮನಿ ಸೇರಿದಂತೆ ಅನೇಕರು ಇದ್ದರು.

# ವಿಶೇಷ ಚೇತನಳ ಕೈಹಿಡಿದು ನಡೆದ ಸಚಿವೆ ಲಕ್ಷ್ಮೀ ಹೆಬ್ಬಾಳ್ಕರ್



ಬೆಳಗಾವಿ : ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಸಚಿವರಾದ ಲಕ್ಷ್ಮೀ ಹೆಬ್ಬಾಳ್ಕರ್ ಕಳೆದ ಎರಡು ದಿನಗಳಿಂದ ರಾಮದುರ್ಗ ವಿಧಾನಸಭಾ ಕ್ಷೇತ್ರದಾದ್ಯಂತ ಅಬ್ಬರದ ಪ್ರಚಾರ ಕೈಕೊಂಡಿದ್ದಾರೆ. ಹೋದಲೆಲ್ಲಾ ಕಾಂಗ್ರೆಸ್ ಅಭ್ಯರ್ಥಿ ಮೃಣಾಲ್ ಹೆಬ್ಬಾಳ್ಕರ್ ಅವರಿಗೆ ಕ್ಷೇತ್ರದ ಜನ ಅಭೂತಪೂರ್ವ ಬೆಂಬಲ ವ್ಯಕ್ತಪಡಿಸುತಿದ್ದಾರೆ.

ರಾಮದುರ್ಗದ ಹಲಗತ್ತಿ, ಲಿಂಗದಾಳ, ಇಡಗಲ್, ಚಿಕ್ಕತಡಸಿ ಗ್ರಾಮಗಳಲ್ಲಿ ಪ್ರಚಾರ ಮುಗಿಸಿದ ಸಚಿವರು, ಹಂಪಿಹೊಳಿಗೆ ಆಗಮಿಸಿದರು. ಹಂಪಿಹೊಳಿಯಲ್ಲಿ ಸಚಿವರಿಗೆ ಅಚ್ಚರಿ ಕಾದಿತ್ತು. ಸಚಿವರಿಗೆ ವಿಶೇಷ ಚೇತನ ಯುವತಿ ರೋಷನ್ ಬೀ ಎಂಬುವರು ಹೂವು ಕೊಟ್ಟು ಸ್ವಾಗತಿಸಿದರು. ಸಚಿವರನ್ನು ಕಂಡು ಖುಷಿಗೊಂಡ ರೋಷನ್ ಬೀ, ಅವರ ಕೈಹಿಡಿದು ಪ್ರಚಾರ ನಗದಿಯಾಗಿದ್ದ ಸ್ಥಳದವರೆಗೂ ನಡೆದರು. ರೋಷನ್ ಬೀ ಅಭಿಮಾನ ಕಂಡು ಸಚಿವೆ ಲಕ್ಷ್ಮೀ ಹೆಬ್ಬಾಳ್ಕರ್ ಕೂಡ ಆಕೆಯೊಂದಿಗೆ ಮುಕ್ತವಾಗಿ ಮಾತನಾಡುತ್ತ ಸಾಗಿದರು. 'ಸಚಿವರನ್ನು ಇಷ್ಟು ದಿನ ಕೇವಲ ಟಿವಿ, ಪೇಪರ್ ಗಳಲ್ಲಿ ನೋಡುತ್ತಿದ್ದೆ. ಇವತ್ತು ಅವರನ್ನು ಹತ್ತಿರದಿಂದ ನೋಡಿ ಖುಷಿ ಆಯಿತು. ನನಗೆ ಸ್ವಂತ ಮನೆ ಇಲ್ಲ. ನನ್ನ ಅಕ್ಕ ಕೂಡ ವಿಕಲ ಚೇತನಳು, ಆಪರೇಷನ್ ಆಗಿದೆ. ನನ್ನ ಕೆಲವೊಂದು ಸಮಸ್ಯೆಗಳನ್ನು ಸಚಿವರಿಗೆ ಹೇಳಿರುವೆ. ಸಮಸ್ಯೆಗಳಿಗೆ ಪರಿಹಾರ ನೀಡುವ ಭರವಸೆ ನೀಡಿದ್ದಾರೆ ಎಂದು ರೋಷನ್ ಬೀ ಹೇಳಿ ಕೊಂಡರು.

*ಮದುವೆ ಕಾರ್ಯಕ್ರಮದಲ್ಲಿ ಭಾಗಿ*

ಬಳಿಕ ರೋಷನ್ ಬೀ ಮನವಿ ಮೇರೆಗೆ ಸಚಿವೆ ಲಕ್ಷ್ಮೀ ಹೆಬ್ಬಾಳ್ಕರ್ ಅವರ ಸಂಬಂಧಿಕರ ಮದುವೆಯ ಆರತಕ್ಷತೆ ಕಾರ್ಯಕ್ರಮದಲ್ಲಿ ಪಾಲ್ಗೊಂಡರು. ಜೊತೆಗೆ ರೋಷನ್ ಬೀ ತಮ್ಮ ಕುಟುಂಬ ಸದಸ್ಯರನ್ನು ಸಚಿವರಿಗೆ ಪರಿಚಯಿಸಿಕೊಟ್ಟು ಸಂಭ್ರಮಿಸಿದರು.

ವಿಕಲ ಚೇತನಳ ಜೀವನೋತ್ಸಾಹ, ಸಚಿವರ ಬಗೆಗಿನ ಪ್ರೀತಿ, ಆಕೆಯ ಕುರಿತ ಸಚಿವರ ಕಾಳಜಿ ಎಲ್ಲವನ್ನೂ ನೋಡಿದ ಅಲ್ಲಿದ್ದವರಿಗೆ ಖುಷಿಯೋ ಖುಷಿ.

# ಮತದಾನದ ಮಹತ್ವ ಕುರಿತು 'ಯುವ ಮತದಾರರಿಂದ ಮಾನವ ಸರಪಳಿ'

## ಜಿಲ್ಲೆಯಲ್ಲಿ ಈ ಬಾರಿ 26 ಸಾವಿರ ಯುವ ಮತದಾರರು ಹೆಸರು ನೋಂದಣಿ: ವೈಶಾಲಿ

ಗದಗ ಏಪ್ರಿಲ್ 19: ಜಿಲ್ಲಾಡಳಿತ, ಜಿಲ್ಲಾ ಪಂಚಾಯತಿ, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ ಹಾಗೂ ವ್ಯವಸ್ಥಿತ ಮತದಾರರ ಶಿಕ್ಷಣ ಮತ್ತು ಸಹಭಾಗಿತ್ವ ಸಮಿತಿ (ಸ್ವೀಪ್) ವತಿಯಿಂದ ಮತದಾನದ ಮಹತ್ವ ಕುರಿತು 'ಯುವ ಮತದಾರರಿಂದ ಮಾನವ ಸರಪಳಿ' ಕಾರ್ಯಕ್ರಮವು ನಗರದ ಕೆ.ಎಚ್.ಪಾಟೀಲ ಜಿಲ್ಲಾ ಕ್ರೀಡಾಂಗಣದಲ್ಲಿ ಶುಕ್ರವಾರ ನಡೆಯಿತು.

ಗದಗ ನಗರದ ವಿವಿಧ ಕಾಲೇಜಿನ ನೂರಾರು ಯುವ ಮತದಾರರು ಮಾನವ ಸರಪಳಿ ಪಾಲ್ಗೊಂಡು ಗಮನ ಸೆಳೆದರು. ಕಾರ್ಯಕ್ರಮದಲ್ಲಿ ಪಾಲ್ಗೊಂಡು ಮಾತನಾಡಿದ ಜಿಲ್ಲಾಧಿಕಾರಿ ವೈಶಾಲಿ ಎಂ.ಎಲ್. ಅವರು ಈ ಬಾರಿ ಜಿಲ್ಲೆಯಲ್ಲಿ ಹೊಸದಾಗಿ 26 ಸಾವಿರ ಮಂದಿ ಯುವ ಮತದಾರರು ಮತದಾರರ ಪಟ್ಟಿಯಲ್ಲಿ ಹೆಸರು ನೋಂದಣಿ ಮಾಡಿರುವುದು ವಿಶೇಷವಾಗಿದೆ ಎಂದು ತಿಳಿಸಿದರು.

18 ವರ್ಷ ಪೂರ್ಣಗೊಂಡ ಅರ್ಹ ಮತದಾರರೆಲ್ಲರೂ ಮತದಾನ ಮಾಡುವುದು ಅತಿ ಮುಖ್ಯವಾಗಿದೆ. ಪ್ರತಿ ಮತವೂ ಅಮೂಲ್ಯವಾಗಿದೆ ಎಂದು ಜಿಲ್ಲಾಧಿಕಾರಿ ಅವರು ನುಡಿದರು. ಚುನಾವಣೆಗೆ ಸಂಬಂಧಿಸಿದಂತೆ ಸಹಾಯವಾಣಿ ಸಂಖ್ಯೆ 1950 ಅಥವಾ ಸಿವಿಜಲ್ ಆಪ್ ಮೂಲಕ ದೂರು ದಾಖಲಿಸಬಹುದಾಗಿದೆ ಜೊತೆಗೆ



ಚುನಾವಣೆಗೆ ಸಂಬಂಧಿಸಿದ ಮಾಹಿತಿಗಳನ್ನು ನೀಡಬಹುದಾಗಿದೆ ಎಂದು ಜಿಲ್ಲಾಧಿಕಾರಿ ವೈಶಾಲಿ ಅವರು ವಿವರಿಸಿದರು. ಜಿಲ್ಲೆಯಲ್ಲಿ ಶೇಕಡಾವಾರು ಮತದಾನ ಹೆಚ್ಚಳಕ್ಕೆ ಯುವ ಮತದಾರರ ಪಾತ್ರ ಹೆಚ್ಚಿನದಾಗಿದೆ. ಆ ನಿಟ್ಟಿನಲ್ಲಿ ಪ್ರತಿಯೊಬ್ಬರೂ ಮತದಾನ ಪ್ರಕ್ರಿಯೆಯಲ್ಲಿ ತೊಡಗಿಸಿಕೊಂಡಾಗ ಪ್ರಜಾಪ್ರಭುತ್ವ ಬಲಪಡಿಸಲು ಸಾಧ್ಯ ಎಂದು ಜಿಲ್ಲಾಧಿಕಾರಿ ವೈಶಾಲಿ ಎಂ.ಎಲ್. ಅವರು ಪ್ರತಿಪಾದಿಸಿದರು.

ಪ್ರಜಾಪ್ರಭುತ್ವದಲ್ಲಿ ದೃಢ ವಿಶ್ವಾಸವುಳ್ಳ ಭಾರತದ ಪೌರರಾದ ನಾವು, ನಮ್ಮ ದೇಶದ ಪ್ರಜಾಸತ್ತಾತ್ಮಕ ಸಂಪ್ರದಾಯಗಳು ಮತ್ತು ಮುಕ್ತ, ನ್ಯಾಯಸಮ್ಮತ ಮತ್ತು ಶಾಂತಿಯುತ ಚುನಾವಣೆಗಳ ಘನತೆಯನ್ನು ಎತ್ತಿ ಹಿಡಿಯುತ್ತೇವೆಂದು ಮತ್ತು ಪ್ರತಿಯೊಂದು ಚುನಾವಣೆಯಲ್ಲಿ ನಿರ್ಭೀತರಾಗಿ ಮತ್ತು ಧರ್ಮ, ಜನಾಂಗ, ಜಾತಿ , ಮತ, ಭಾಷೆ ಅಥವಾ ಯಾವುದೇ ಪ್ರೇರೇಪಣೆಗಳ ದಾಕ್ಷಿಣ್ಯಗಳಿಂದ ಪ್ರಭಾವಿತರಾಗದೇ ಮತ ಚಲಾಯಿಸುತ್ತೇವೆಂದು ಪ್ರತಿಜ್ಞಾ ವಿಧಿ ಬೋಧಿಸಿದರು.

ಜಿ.ಪಂ.ಸಿಇಒ ಎಸ್.ಭರತ್ ಅವರು ಮಾತನಾಡಿ ಮೇ 7 ರಂದು ನಡೆಯುವ ಮತದಾನದಂದು ಅರ್ಹರೆಲ್ಲರೂ ಮತ ಚಲಾಯಿಸಬೇಕು. ಅರ್ಹರು ಮತದಾನದಿಂದ ವಂಚಿತರಾಗಬಾರದು ಎಂದು ತಿಳಿಸಿದರು.

ಚುನಾವಣಾ ಪ್ರಕ್ರಿಯೆಯಲ್ಲಿ ಯುವಜನರು ಸಡಗರ–ಸಂಭ್ರಮದಿಂದ ಮತ ಹಕ್ಕು ಚಲಾಯಿಸಬೇಕು. ಪ್ರತಿಯೊಂದು ಮತವೂ ಸಹ ಅತ್ಯಮೂಲ್ಯವಾಗಿದ್ದು ಜಿಲ್ಲೆಯಲ್ಲಿ ಶೇಕಡಾವಾರು ಮತದಾನ ಹೆಚ್ಚಳಕ್ಕೆ ಪ್ರತಿಯೊಬ್ಬರೂ ಕೈ ಜೋಡಿಸಬೇಕು ಎಂದು ಸ್ವೀಪ್ ಸಮಿತಿ ಅಧ್ಯಕ್ಷರು ಕೋರಿದರು. 'ಜಿಲ್ಲಾ ಚುನಾವಣಾ ರಾಯಭಾರಿ ಹಾಗೂ ಅಂತರಾಷ್ಟ್ರೀಯ ಕುಸ್ತಿಪಟು ಪ್ರೇಮಾ ಹುಚ್ಚಣ್ಣವರ ಮಾತನಾಡಿ ಯುವ ಜನರು ಯಾವುದೇ ಆಸೆ–ಆಮಿಷಗಳಿಗೆ ತುತ್ತಾಗದೇ ಮತ ಚಲಾಯಿಸಬೇಕು ಎಂದು ಅವರು ಕರೆ ನೀಡಿದರು.'

'ಮತ್ತೊಬ್ಬ ಜಿಲ್ಲಾ ಚುನಾವಣಾ ರಾಯಭಾರಿ ಹಾಗೂ ಅಂತರಾಷ್ಟ್ರೀಯ ಯೋಗಪಟು ಭೀಮಪ್ಪ ಯಮುನಪ್ಪ ಕಬಾಡರ ಮಾತನಾಡಿ ರಾಷ್ಟ್ರದ ಸುಭದ್ರತೆಗೆ ಹಾಗೂ ಆರ್ಥಿಕ ಸಬಲೀಕರಣಕ್ಕೆ ಅರ್ಹರೆಲ್ಲರೂ ಕಡ್ಡಾಯವಾಗಿ ಮತ ಹಕ್ಕು ಚಲಾಯಿಸಬೇಕು. ಆ ನಿಟ್ಟಿನಲ್ಲಿ ದೇಶದ ಅಭಿವೃದ್ಧಿಗೆ ಪ್ರತಿಯೊಬ್ಬರೂ ಕೈ ಜೋಡಿಸಬೇಕು ಎಂದು ಅವರು ಕರೆ ನೀಡಿದರು.'

ಜಿ.ಪಂ.ಉಪ ಕಾರ್ಯದರ್ಶಿ ಹಾಗೂ ಸ್ವೀಪ್ ಸಮಿತಿಯ ಜಿಲ್ಲಾ ನೋಡಲ್ ಅಧಿಕಾರಿ ಸಿ.ಬಿ.ದೇವರಮನಿ, ತಾ.ಪಂ.ಇಒ ಮಾಣಿಕರಾವ್ ಪಾಟೀಲ, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ಸಹಾಯಕ ನಿರ್ದೇಶಕರಾದ ಶರಣು ಗೋಗೇರಿ, ವಿವಿಧ ಇಲಾಖೆಯ ಅಧಿಕಾರಿಗಳು, ಶಾಲಾ ಕಾಲೇಜುಗಳ ಪ್ರಾಂಶುಪಾಲರು ಉಪನ್ಯಾಸಕರು ಇತರರು ಇದ್ದರು.

GADI KANNADIGA,kannada daily, printed, published , edited, & woned by murugesh b.shivapuji ,printed ,plot no:12,sy no:174/3b,press colony,kuvempu nagar, post:hindalaga-591108,Tq & Dt:belgaum, And published at plot no:12,sy no:174/3b,press colony,kuvempu nagar,post:hindalaga-591108,Tq & Dt:belgaum, karnataka, RNI NO:KAR KAN/2003/10452. Permission to post at Belagavi, Kacheri post office Belagavi. No:PMG/KA/NK/BM/743/24-26